# ಹಣಕಾಸು ಶಿಕ್ಷಣ ಮತ್ತು ಹೂಡಿಕೆ ದೇಶದ ಅಭಿವೃದ್ಧಿಗೆ ಪೂರಕ



ಬಳ್ಳಾರಿ ಮಾ– ಹಣಕಾಸು ಶಿಕ್ಷಣ ಮತ್ತು ಹೂಡಿಕೆ ಎಂಬ ವಿಷಯವನ್ನು ಕೌಶಲ್ಯವರ್ಧನೆ ವಿಷಯವನ್ನಾಗಿ ಪಠ್ಯಕ್ರಮದಲ್ಲಿ ಅಳವಡಿಸಿರುವುದರಿಂದ ಉನ್ನತ ಶಿಕ್ಷಣದಲ್ಲಿ ವಿದ್ಯಾರ್ಥಿಗಳ ಕ್ಷಿಪ್ರ ಕಲಿಕೆಗೆ ಹಾಗೂ ಉದ್ಯೋಗಶೀಲರನ್ನಾಗಿಸಲು ಸಹಕಾರಿಯಾಗುತ್ತದೆ ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ. ಕೆ. ಎಂ. ಮೇತ್ರಿ ಎಂದು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಗುರುವಾರ ವಾಣಿಜ್ಯ ಅಧ್ಯಯನ ವಿಭಾಗದ ವತಿಯಿಂದ ಆಯೋಜಿಸಲಾದ 'ವ್ಯಾಪಾರದಲ್ಲಿ ಸ್ಥಿತಿಸ್ಥಾಪಕತ್ವದ ನವ ಪ್ರವೃತ್ತಿ' ಎಂಬ ವಿಷಯದ ಕುರಿತು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಜ್ಯೋತಿ ಬೆಳಗಿಸುವ ಮುಖಾಂತರ ಉದ್ಘಾಟಿಸಿ ಅವರು ಮಾತನಾಡಿದರು.

ವಾಣಿಜ್ಯ ಅಥವಾ ನಿರ್ವಹಣಾಶಾಸ್ತ್ರ ವಿಭಾಗದ ವಿದ್ಯಾರ್ಥಿಗಳಿಗೆ ಸೀಮಿತವಾಗದೆ ಇನ್ನಿತರ ವಿಭಾಗಗಳ ವಿದ್ಯಾರ್ಥಿಗಳಿಗೆ ಬಹುಶಿಸ್ತೀಯ ಅಧ್ಯಯನ ವಿಷಯವಾಗಿ ಪರಿಚಯಿಸುವುದು ಅಗತ್ಯ ಎಂದು ಹೇಳಿದರು.

ಪ್ರತಿಯೊಂದು ವಿಷಯದ ಅಭಿವೃದ್ಧಿಗೆ ತಳಮಟ್ಟದ ಅಧ್ಯಯನ ಬಹು ಮುಖ್ಯವಾಗಿದೆ ಮುಂದಿನ ದಿನಗಳಲ್ಲಿ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕೆಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಅಗಮಿಸಿದ್ದ ಸೌತ್ ಇಂಡಿಯನ್ ರೀಜನಲ್ ಕೌನ್ಸಲ್ ಆಫ್ ಇನ್ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ ನಿಕಟಪೂರ್ವ ಅಧ್ಯಕ್ಷರಾದ ಸಿ. ಎ. ಪನ್ನಾರಾಜ್ ಎಸ್., ಮಾತನಾಡಿ ವ್ಯಾಪಾರದಲ್ಲಿ ಅನೇಕ ಅಡೆ–ತಡೆಗಳು ಇರುವುದು ಸಾಮಾನ್ಯ ಅದರಿಂದ ಹೊರಬರುವುದು ಈ ಸಮ್ಮೇಳನದ ಉದ್ದೇಶವಾಗಿದೆ. ಪ್ರಸುತ್ತ ದಿನಗಳಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮವು ದೇಶದ ಅಭಿವೃದ್ಧಿಗೆ ಪೂರಕವಾಗಿದೆ. ಕೇಂದ್ರ ಸರ್ಕಾರವು ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದು ವಾಣಿಜ್ಯೋದ್ಯಮಿಗಳು ಇದರ ಸದಪಯೋಗ ಪಡೆದುಕೊಳ್ಳಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಮುಖ್ಯ ಭಾಷಣಕಾರರಾಗಿ ಅಗಮಿಸಿದ್ದ ಅಂತರರಾಷ್ಟ್ರೀಯ ಕಾರ್ಯಕ್ರಮಗಳು ಮತ್ತು ಪಾಲುದಾರಿಕೆಗಳ ಮೌಂಟ್ ಕಾರ್ಮೆಲ್ ಕಾಲೇಜು ಡೀನರಾದ ಡಾ. ಎಸ್. ರಮೇಶ್ ಮಾತನಾಡಿ, ಹಣ, ಅಧಿಕಾರ, ಆರೋಗ್ಯ ಮತ್ತು ಮನೋರಂಜನೆ ಒಂದಕ್ಕೊಂದು ಸಂಬಂಧಿಸಿದ ವಿಷಯಗಳು. ಇವುಗಳ ಸಮರ್ಪಕ ನಿರ್ವಹಣೆ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲರಿಂದ ಸಾಧ್ಯವಿಲ್ಲ. ತಂತ್ರಜ್ಞಾನ ಬಳಕೆ ಮತ್ತು ಕೌಶಲ್ಯಯುತ ಕಲಿಕೆಯ ಸಮಜ್ಞಾನದಿಂದ ಇವುಗಳ ನಿರ್ವಹಣೆ ಭಾಗಶಃ ಪಡೆದುಕೊಳ್ಳಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿವಿಯ ಕುಲಸಚಿವರಾದ ರುದ್ರೇಶ್ ಎಸ್ ಎನ್, ಕುಲಸಚಿವರು (ಮೌಲ್ಯಮಾಪನ) ಪ್ರೊ. ರಮೇಶ್ ಓಲೇಕಾರ್, ವಿತ್ತಾಧಿಕಾರಿ ಪ್ರೊ. ಸದ್ಯೋಜಾತಪ್ಪ, ನಿರ್ವಹಣಾಶಾಸ್ತ್ರ ಡೀನರಾದ ಪ್ರೊ. ಜಿ.ಪಿ. ದಿನೇಶ್ ಸಮ್ಮೇಳನದ ಸಂಚಾಲಕರಾದ ಪ್ರೊ. ಜೀಲನ್ ಬಾಷಾ ಹಾಗೂ ಪ್ರೊ. ಭೀಮನಗೌಡ ಉಪಸ್ಥಿತರಿದ್ದರು.

ಸಮ್ಮೇಳನದಲ್ಲಿ ನೂರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿ ತಮ್ಮ ಸಂಶೋಧನಾ ಕುರಿತಾದ ಪ್ರಬಂಧವನ್ನು ಮಂಡಿಸಿದರು. ಅತಿಥಿಗಳನ್ನು ಪ್ರೊ. ಜೀಲನ್ ಬಾಷಾ, ಸ್ವಾಗತಿಸಿದರು. ಪ್ರೊ. ಭೀಮನಗೌಡ ವಂದಿಸಿದರು. ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ, ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಬೆಂಬಲ ಬೆಲೆ ಯೋಜನೆಯಡಿ ಎಫ್ಎ ಕ್ಯೂ ಗುಣಮಟ್ಟದ ಜೋಳ ಖರೀದಿಗೆ ಬೆಲೆ ನಿಗದಿಮೇ 31 ರವರೆಗೆ ನೋಂದಣಿ ಕಾರ್ಯ

ಗದಗ ,ಮಾರ್ಚ 14: 2023–24 ನೇ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಜೋಳ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದ್ದು ಮೇ 31 ರವರೆಗೆ ನೊಂದಣಿ ಕಾರ್ಯ ಕೈಗೊಳ್ಳಲಾಗುವುದು. ನೊಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾ ಭವನದಲ್ಲಿ ಗುರುವಾರದಂದು 2023–24 ನೇ ಸಾಲಿನ ಹಿಂಗಾರು ಋತುವಿನಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಜೋಳ ಕೃಷಿ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಗ್ರೇಡರ್ಸ್‌ಗಳನ್ನು ನೇಮಿಸಬೇಕು. ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರಗೆ 20 ಕ್ವಿಂಟಾಲ್‌ನಂತೆ ರೈತರಿಂದ ಅವರು ಹೊಂದಿರುವ ಜಮೀನಿಗೆ ಅನುಗುಣವಾಗಿ ಎಫ್.ಐ.ಡಿ. ಪ್ರಕಾರ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಡಾ. ಹಂಪಣ್ಣ ಸಜ್ಜನ ಅವರು ಮಾತನಾಡಿ ಜೋಳ ಉತ್ಪನ್ನ ಖರೀದಿ ನೋಂದಣಿ ಕಾರ್ಯ ಮೇ 31 ರವರೆಗೆ ನೋಂದಣಿ ಕೈಗೊಳ್ಳಲಾಗುವುದು. ಪ್ರತಿ ಕ್ವಿಂಟ್‌ಲ್‌ಗೆ ಜೋಳ □ (ಹೈಬ್ರೀಡ್) ಗೆ 3180 ರೂ ಹಾಗೂ ಜೋಳ– (ಮಾಲ್ದಂಡಿ) ಗೆ 3225 ರೂ. ನಿಗದಿಪಡಿಸಲಾಗಿದ್ದು, ಖರೀದಿ ಪ್ರಕ್ರಿಯೆ ಎಪ್ರಿಲ್ 1 ರಿಂದ ಮೇ 31 ರವರೆಗೆ ಜರುಗಲಿದೆ. ಶಾಖಾ ವ್ಯವಸ್ಥಾಪಕರು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ಶಾಖಾ ಗದಗ ಹಾಗೂ ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನರಗುಂದ ಈ ಎರಡು ಸಂಸ್ಥೆಗಳನ್ನು ಖರೀದಿ ಸಂಸ್ಥೆಗಳನ್ನಾಗಿ ನಿಗದಿಪಡಿಸಲಾಗಿದೆ.



ಜಿಲ್ಲೆಯ 5 ಕಡೆಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಕೃಷಿ ಇಲಾಖೆ, ಎಪಿಎಂಸಿ ಕಾರ್ಯದರ್ಶಿ, ಕೃಷಿ ಮಾರಾಟ ಇಲಾಖೆ, ಕಾನೂನು ಮಾಪನ ಇಲಾಖೆ, ಕೆ.ಎಫ್.ಸಿ.ಎಸ್.ಸಿ ಹಾಗೂ ಮಾರ್ಕೆಟಿಂಗ್ ಫೆಡರೇಶನ್‌ದ ಶಾಖಾ ವ್ಯವಸ್ಥಾಪಕರು, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಜಿಲ್ಲೆಯ 5 ಕಡೆಗಳಲ್ಲಿ ಜೋಳ ಖರೀದಿ ಕೇಂದ್ರಗಳು : ಗದಗ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ, ಲಕ್ಷ್ಮೇಶ್ವರ ಎಪಿಎಂಸಿ ಪ್ರಾಂಗಣ, ಮುಂಡರಗಿ ಎಪಿಎಂಸಿ ಪ್ರಾಂಗಣ, ನರಗುಂದ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ, ರೋಣ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ.

# ಮಹಿಳೆಯರು ಅಭಿವೃದ್ಧಿ ಹೊಂದಿದರೆ, ದೇಶಅಭಿವೃದ್ಧಿ ಹೊಂದಲು ಸಾಧ್ಯ: ರಾಜಶ್ರೀ ಜೈನಾಪೂರ



ಬೆಳಗಾವಿ: ನಗರದ ಪ್ರತಿಷ್ಠಿತ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆಘಟಕ ಮಹಾವಿ ದ್ಯಾಲಯದ ಸಭಾಭವನದಲ್ಲಿ ಮಾರ್ಚ್ 14, 2024ರಂದು 'ಅಂತಾರಾಷ್ಟ್ರೀಯಮಹಿಳಾ ದಿನಾಚರಣೆ' ಯನ್ನುಆಚರಿಸಲಾಯಿತು. ಉದ್ಘಾಟಕರಾಗಿಆಗಮಿಸಿದ ರಾಣಿಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರು ಶ್ರೀಮತಿ ರಾಜಶ್ರೀ ಜೈನಾಪೂರಅವರು ಮಾತನಾಡುತ್ತಮಹಿಳೆಯರು ಅಭಿವೃದ್ಧಿ ಹೊಂದಿದರೆ, ದೇಶಅಭಿವೃದ್ಧಿ ಹೊಂದಲು ಸಾಧ್ಯ ಎಂದು ನೆಹರುಅವರ ಮಾತುಗಳನ್ನು ಸ್ಮರಿಸಿಕೊಂಡರು.ಮಹಾವಿದ್ಯಾಲಯದ ಮಹಿಳಾ ಸಬಲೀಕರಣ ಕೋಶ ಹಾಗೂ ಐಕ್ಯೂಎಸಿ ಘಟಕದಆಶ್ರಯದಲ್ಲಿ ಹಮ್ಮಿಕೊಂಡ 'ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ'ಯನ್ನು ಉದ್ಘಾಟಿಸಿ ಅವರುಮಾತುನಾಡಿದರು.ಎಲ್ಲ ಕ್ಷೇತ್ರಗಳಲ್ಲಿ ಮಹಿಳೆಯರಿಗೆ 33%ರಷ್ಟು ಮೀಸಲಾತಿಇರುವುದರಿಂದಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ದೇಶನಮಗೆ ಏನು ಕೊಡುತ್ತದೆಎನ್ನುವುಕಿಂತದೇಶಕ್ಕಾಗಿ ನಾವು ಏನು ಕೊಡಬೇಕುಎಂಬುದು ಮುಖ್ಯಎಂದುಎಲ್ಲರನ್ನು ಪ್ರೇರೇಪಿಸಿದರು.

ನಮ್ಮ ಸಾಧನೆಯ ಮೂಲಕ ನಮ್ಮನ್ನುಜಗತ್ತುಗುರ್ತಿಸಬೇಕು ಆ ರೀತಿಯ ಸಾಧನೆ ಮಾಡಿರಿಎಂದರು.ನಮ್ಮಲ್ಲಿರುವ ಅಬಲೆ ಎನ್ನುವಗುಣವನ್ನು ಗುರ್ತಿಸಿ ಅದನ್ನು ನಾಶ ಮಾಡಿದೊಡ್ಡಗುರಿಯಿಟ್ಟು ಮುನ್ನುಗ್ಗಿರಿಅದಕ್ಕೆ ನಾವು ಸಹಕರಿಸುತ್ತೇವೆಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಶ್ರೀಮತಿ ರೇಣುಕಾಜಕನೂರ, ಪಿ.ಎಸ್.ಐ. ಡೈರೆಕ್ಟೋರೇಟ್‌ಆಫ್ ಸಿವಿಲ್ ರೈಟ್ಸ್‌ಎನ್‌ಫೋರ್ಸಮೆಂಟ್, ಬೆಳಗಾವಿ.ಇವರು ಮಾತನಾಡುತ್ತಾ ಮಹಿಳೆಯರು ಯಾವುದೇತೊಂದರೆಯಲ್ಲಿ ಸಿಕ್ಕುಹಾಕಿಕೊಂಡರೆ 112ಕ್ಕೆ ಕರೆ ಮಾಡಿದರೆ ನಮಗೆ ಬೇಕಾದ ಸಹಾಯ ಕೇವಲ 20 ನಿಮಿಷದಲ್ಲಿ ಲಭ್ಯವಾಗುತ್ತದೆ.

ನಮ್ಮ ಮೊಬೈಲ್‌ಟ್ರೆಸ್ ಮಾಡಿ ನೀವು ಇರುವಲ್ಲಿಗೆಟಾಸ್ಕ್ ಫೋರ್ಸ್ ಬೇಗನೆ ತಲುಪುತ್ತದೆಎಂದರು.ಮಹಿಳೆಯರ ಆರ್ಥಿಕತೆಯದೃಷ್ಟಿಯಿಂದ ಸಬಲರಾಗಬೇಕು.ಮೊದಲು ಉದ್ಯೋಗಗಳನ್ನು ಹಿಡಿದುದುಡಿಮೆಯನ್ನು ಪ್ರಾರಂಭಿಸಬೇಕು ಆಗ ಮಾತ್ರ ಮಹಿಳೆಯರಿಗೆ ಸಮಾಜದಲ್ಲಿಗೌರವ ಸ್ಥಾನ ದೊರಕುತ್ತದೆಎಂದರು. ಬೇರೆಬೇರೆ ಕ್ಷೇತ್ರಗಳ ಬಗ್ಗೆ ನಾ ಕಾಣೆ! ಆದರೆ, ಪೊಲೀಸ್ ಪಡೆಯಲ್ಲಿ ಕೆಲಸ ಮಾಡುವ ಮಹಿಳೆಯರು ಮಾತ್ರ 100% ಸ್ವಾತಂತ್ರ್ಯವನ್ನುಅನುಭವಿಸುತ್ತಾರೆಎಂದು ಸಂತೋಷದ ನಗೆ ಚೆಲ್ಲಿದರು.

ಸಭೆಯಅಧ್ಯಕ್ಷತೆಯನ್ನು ವಹಿಸಿಕೊಂಡ ಪ್ರಾಚಾರ್ಯರುಡಾ.ಶಂಕರಎಸ್. ತೇರದಾಳಅವರುಮಾತುನಾಡುತ್ತಾ ಹೆಣ್ಣನ್ನು ಪ್ರಾಚೀನ ಕಾಲದಿಂದಲೂಗೌರವ ಸ್ಥಾನದಲ್ಲಿಟ್ಟು ಪೂಜಿಸಲಾಗುತ್ತಿದೆಎಂದರು.

ಹೆಣ್ಣಿನಲ್ಲಿರುವ ತಾಳ್ಮೆಯ ಗುಣ, ನಮ್ರತೆ, ಸೌಮ್ಯತೆ, ಸಂವೇದನಾಶೀಲತೆ, ಸಹಾನುಭೂತಿ, ಪ್ರೀತಿ–ವಾತ್ಸಲ್ಯ, ಮೃದುತ್ವ ಮತ್ತು ಭಾವನಾತ್ಮಕತೆಎಲ್ಲದರಲ್ಲಿಯೂ ಮೇಲುಪಂಕ್ತಿಯಲ್ಲಿ ಅವಳ ಗುಣಗಳು ಬರುತ್ತವೆಂದು ಮನದುಂಬಿ ಪ್ರಶಂಸಿಸಿದರು.

ಕುಮಾರಿ ಪ್ರಿಯಾಂಕಾತಿಲಗಾರ ಸ್ವಾಗತಗೀತೆಯನ್ನು ಹಾಡಿದರು.ಡಾ. ರಾಧಾ ಬಿ.ಆರ್. ಅತಿಥಿಗಳನ್ನು ಸ್ವಾಗತಿಸಿದರು.ಡಾ. ಸುಮನ ಮುದ್ದಾಪೂರ ಪ್ರಸ್ತಾವಿಕ ನುಡಿಗಳನ್ನಾಡಿದರು.ಭಾಗ್ಯಶ್ರೀ ಹಳೇಮನಿ ವಂದಿಸಿದರು.

ಡಾ. ಜ್ಯೋತಿ ಪಾಟೀಲ ಕಾರ್ಯಕ್ರಮವನ್ನು ನಿರೂಪಿಸಿದರು. ವೇದಿಕೆ ಮೇಲೆ ಡಾ.ಆದಿನಾಥಉಪಾಧ್ಯೆ ಉಪಸ್ಥಿತರಿದ್ದರು.ಬೋಧಕ ಹಾಗೂ ಬೋಧಕೇತರ ಸರ್ವ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಲೋಕಸಭೆ ಚುನಾವಣೆಯಿಂದ ನನ್ನ ಅಜ್ಞಾತವಾಸ ಮುಕ್ತಾಯವಾಗಿದೆ–ಬಿ.ಶ್ರೀರಾಮುಲು



ಬಳ್ಳಾರಿ ಮಾ–:ಕೇಂದ್ರ ಲೋಕ ಸಭೆ ಚುನಾವಣೆಯ ಪಟ್ಟಿ ಬುಧವಾರ ಬಿಡುಗಡೆಗೊಳಿಸಿದ್ದು, ಬಳ್ಳಾರಿ ಜಿಲ್ಲೆಗೆ ಸ್ಪರ್ಧೆ ಮಾಡಲು ನನಗೆ ಅವಕಾಶ ನೀಡಿರೋ ಮೋದಿ, ನಡ್ಡಾ, ಅಮಿತ್ ಶಾ , ಸಂತೋಷ ಜಿ ..ಯಡಿಯೂರಪ್ಪ ಧನ್ಯವಾದಗಳು ಅರ್ಪಿಸುತ್ತೇನೆ ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಅವರು ಹೇಳಿದರು.ನಗರದ ಅಹಂಬಾವಿಯ ಗೃಹ ಕಚೇರಿಯಲ್ಲಿ ಗುರುವಾರ ಆಯೋಜನೆ ಮಾಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.ನನ್ನ ವಿಧಾನ ಸಭೆ ಚುನಾವಣೆಯ ಸೋಲಿನಿಂದ ಅಜ್ಞಾತ ವಾಸಕ್ಕೆ ಕಳುಹಿಸಲಾಗಿತ್ತು. ಆದರೆ ಈಗ ಲೋಕಸಭೆ ಚುನಾವಣೆಯಿಂದ ಅಜ್ಞಾತವಾಸ ಮುಕ್ತಾಯವಾಗಿದೆ ಎಂದರು.ವಿಧಾನ ಸಭೆ ಚುನಾವಣೆಯಲ್ಲಿ ದ್ವೇಷ ಮತ್ತು ಮೋಸದ ರಾಜಕೀಯ ಮಾಡಿಲಾಗಿತ್ತು. ಆದರೆ ಈಗ ಅದು ನಡೆಯೋಲ್ಲ ಎಂದ ಅವರು, ನಗರಸಭೆ ಸದಸ್ಯನಂದ ಜೀವನ ಪ್ರಾರಂಭಿಸಿ ಶಾಸಕ, ಸಂಸದ, ಸಚಿವರಾಗಿ ಕೆಲಸ ಮಾಡಿದ್ದೇನೆ. ನನ್ನ ಕೆಲಸದ ಬಗ್ಗೆ ಬಳ್ಳಾರಿ ಜನತೆಗೆ ಗೊತ್ತಿದೆ. ಹಾಗಾಗಿ ಈ ಬಾರಿ ನನ್ನ ಜನ ನನ್ನ ಕೈ ಬಿಡಲ್ಲ ಎಂಬ ಆತ್ಮ ವಿಶ್ವಾಸ ಇದೆ ಎಂದರು.ಆಡು ಮುಟ್ಟದ ಸೊಪ್ಪಿಲ್ಲ ರಾಮುಲು ಪ್ರೀತಿ ಮಾಡೋ ವ್ಯಕ್ತಿ ಇಲ್ಲ ಎಂಬ ಗಾದೆ ಮಾತು ಹೇಳಿದ ರಾಮುಲು ಅವರು, ಮೂವತ್ತು ವರ್ಷದ ಸುದೀರ್ಘ ರಾಜಕೀಯ ಈ ಬಾರಿ ನನ್ನ ಕೈ ಹಿಡಿಯುತ್ತದೆ. ಮೋದಿ ಮತ್ತೊಮ್ಮೆ ಪ್ರಧಾನಿಯಾಗಬೇಕು. ಜೊತೆಗೆ ನಾಲ್ಕು ನೂರು ಕ್ಷೇತ್ರದಲ್ಲಿ ಬಿಜೆಪಿ ಗೆಲ್ಲಬೇಕು. ಇದರಿಂದ ಕೇಂದ್ರ ಮತ್ತು ರಾಜ್ಯ ಸುಭಿಕ್ಷೆಯಾಗಲಿದೆ ಎಂದರು.ಇದು ಕೇವಲ ರಾಮುಲು ಚುನಾವಣೆ ಅಲ್ಲ ಇಡೀ ದೇಶದ ಚುನಾವಣೆ ಇದಾಗಿದೆ. ಜನರು ಮೋದಿ ಅವರನ್ನು ಸಾಕಷ್ಟು ಹತ್ತಿರದಿಂದ ನೋಡಿದ್ದಾರೆ. ಮತ್ತು ಮೋದಿಯವರು ಜನರ ವಿಶ್ವಾಸಗಳಿಸಿದ್ದಾರೆ ಎಂದರು.ಕಾಂಗ್ರೆಸ್ ಧುರಾಡಳಿತ, ದುರಂಹಕಾರ ಮತ್ತು ಕುಟುಂಬ ರಾಜಕೀಯದಿಂದ ಒಂದೇ ಕುಟುಂಬ ರಾಜಕೀಯಕ್ಕೆ ಸೀಮಿತವಾಗಿತ್ತು. ಬಳ್ಳಾರಿ ಕಾಂಗ್ರೆಸ್ ಭದ್ರ ಕೋಟೆಯಾಗಿತ್ತು.. 1999ರ ಸುಷ್ಮಸ್ವರಾಜ್ ಚುನಾವಣೆ ಬಳಿಕ ಬಿಜೆಪಿ ಗಟ್ಟಿಯಾಗಿದೆ. ಸುಷ್ಮಸ್ವರಾಜ್ ಸೋತ್ರು ನಂತರ ನಿರಂತರವಾಗಿ ಬಿಜೆಪಿ ಬಳ್ಳಾರಿಯಲ್ಲಿ ಗೆದ್ದಿದೆ ಎಂದ ಅವರು, ಕಾಂಗ್ರೆಸ್ ನವರು ಶ್ರೀರಾಮುಲು ಅವರನ್ನು ಚಕ್ರವ್ಯೂಹದಲ್ಲಿ ಸಿಲುಕಿಸೋ ಪ್ಲಾನ್ ಮಾಡ್ತಿದ್ದಾರೆ. ಆದರೆ ನಮ್ಮ ಕಾರ್ಯಕರ್ತರು ಅದಕ್ಕೆ ಅವಕಾಶ ನೀಡೋದಿಲ್ಲ ಎಂದರು.



ಮೂಡಲಗಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ನೂತನ ಕುಲಪತಿಗಳಾದ ಪ್ರೊ.ಎಂ.ಸಿ.ತ್ಯಾಗರಾಜ ಅವರನ್ನು ಮೂಡಲಗಿ ಶಿಕ್ಷಣ ಸಂಸ್ಥೆಯ ವ್ಹಾಯಿಸ್ ಚೇರಮನ್ನ ಆರ್.ಪಿ.ಸೋನವಾಲ್ಕರ, ಪ್ರಾಚಾರ್ಯ ಪ್ರೊ.ಸಂಗಮೇಶಗುಜಗೊಂಡಹಾಗೂಸಿಬ್ಬಂದಿಯವರುಸನ್ಮಾನಿಸಿಅಭಿನಂದಿಸಿದರು.

# ನೀರಿನ ಅರವಟಿಗೆ ಉದ್ಘಾಟಿಸಿದ ಪಾಲಿಕೆ ಸದಸ್ಯ ಎಂ.ಪ್ರಭಂಜನ್ ಕುಮಾರ್



ಬಳ್ಳಾರಿ ಮಾ –:.ಬಳ್ಳಾರಿ ನಗರದ 11ನೇ ವಾರ್ಡಿನ ಗ್ರಹಂ ರಸ್ತೆಯಲ್ಲಿ ಬಳ್ಳಾರಿಯಲ್ಲಿ ಬಿಸಿಲಿನ ತಾಪ ಹೆಚ್ಚಾಗುತ್ತಿರುವುದರಿಂದ ಶ್ರೀ ಶಿರಿಡಿ ಸಾಯಿ ಸೇವಾ ಸತ್ಸಂಗ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ನೀರಿನ ಅರವಟಿಗೆ ಮತ್ತು ಮಜ್ಜಿಗೆ ವಿತರಣೆ ಕಾರ್ಯಕ್ರಮವನ್ನು 3ನೇ ವಾರ್ಡಿನ ಮಹಾನಗರ ಪಾಲಿಕೆ ಸದಸ್ಯ ಎಂ.ಪ್ರಭಂಜನ್ ಕುಮಾರ್ ಉದ್ಘಾಟಿಸಿ ಜನರಿಗೆ ವಿತರಣೆ ಮಾಡಿದರು.ಈ ಸಂಧರ್ಭದಲ್ಲಿ 11 ನೇವಾರ್ಡಿನ ಮಹಾನಗರ ಪಾಲಿಕೆ ಸದಸ್ಯ ಎನ್.ಗೋವಿಂದರಾ ಜುಲು,ಹಾಗೂ ಟ್ರಸ್ಟ್ ಅಧ್ಯಕ್ಷರಾದ ಆರ್ ಗೋಪಾಲಕೃಷ್ಣ ,ಉಪಾಧ್ಯಕ್ಷ ರಾದ ಕೆ ಹೆಚ್ ರಮೇಶ್ ,ಖಜಾಂಚಿ ಕೆ.ಗೋವಿಂದರಾಜು,ಹಾಗೂ ಟ್ರಸ್ಟ್ ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಪಾಪನಾಶಿ ಅಂಗನವಾಡಿ ನೂತನ ಕಟ್ಟಡಕ್ಕೆ ಭೂಮಿಪೂಜೆ



ಗದಗ : ತಾಲ್ಲೂಕಿನ ಪಾಪನಾಶಿ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ 277 ರ ನೂತನ ಕಟ್ಟಡ ನಿರ್ಮಾಣಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಹಾಗೂ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ 20 ಲಕ್ಷ ರೂಪಾಯಿಗಳು ಅನುದಾನ ಮಂಜೂರು ಆಗಿದ್ದು, ನೂತನ ಕಟ್ಟಡ ನಿರ್ಮಾಣದ ಭೂಮಿಪೂಜೆಯನ್ನು ಬುಧವಾರ ಅಡವಿಸೋಮಾಪೂರ ಗ್ರಾಮ ಪಂಚಾಯತಿಯ ಅಧ್ಯಕ್ಷೆ ಕೀರ್ತಿ ಪಾಟೀಲ ಮತ್ತು ಉಪಾಧ್ಯಕ್ಷ ಶಾಮಸುಂದರ ಡಂಬಳ ಅವರು ನೆರವೇರಿಸಿದರು.ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಸದಸ್ಯರಾದ ಈಶಪ್ಪ ಇಟಗಿ, ಕಮಲಮ್ಮ ಮಾದರ ಹಾಗೂ ಪ್ರೇಮಾ ಹಟ್ಟಿ. ಪಿಡಿಓ ಹಾಗೂ ಗ್ರಾಮದ ಗುರುಹಿರಿಯರು ಹಾಜರಿದ್ದರು.

# ಕೊಪ್ಪಳ, ಗಂಗಾವತಿ, ಕಲಬುರಗಿ, ಬೀದರ್ ಮಾರ್ಗಕ್ಕೆ ನೂತನ ಸಾರಿಗೆ ಆರಂಭ

ಕೊಪ್ಪಳ, ಮಾರ್ಚ್–: ಕೊಪ್ಪಳ ಜಿಲ್ಲೆಯ ಜನಪ್ರತಿನಿಧಿಗಳು, ಸಾರ್ವಜನಿಕ ಪ್ರಯಾಣಿಕರ ಬೇಡಿಕೆಯ ಮೇರೆಗೆ ಕಲ್ಯಾಣ ಕನಾಟಕ ರಸ್ತೆ ಸಾರಿಗೆ ನಿಗಮದಿಂದ ಕೊಪ್ಪಳ, ಗಂಗಾವತಿ, ಕಲಬುರಗಿ, ಬೀದರ್ ಮಾರ್ಗದಲ್ಲಿ ನೂತನ ಪ್ರತಿಷ್ಠಿತ ರಾತ್ರಿ ಸಾರಿಗೆಯನ್ನು (ನಾನ್ ಎಸಿ ಸ್ಲೀಪರ್) ಪ್ರಾರಂಭಿಸಲಾಗಿದೆ.

ಸಾರಿಗೆ ಕಾರ್ಯಾಚರಣೆ ಸಮಯ: ಕಲ್ಯಾಣ ಕನಾಟಕ ರಸ್ತೆ ಸಾರಿಗೆ ನಿಗಮದಿಂದ ನಾನ್ ಎಸಿ ಸ್ಲೀಪರ್ ವಾಹನವು ಕೊಪ್ಪಳದಿಂದ 20.30 ಗಂಟೆಗೆ ಹಾಗೂ ಗಂಗಾವತಿಯಿಂದ 4.15 ಮತ್ತು 21.45ಕ್ಕೆ ಹೊರಡಲಿದ್ದು, ಕಲಬುರಗಿಗೆ 3.45ಕ್ಕೆ, ಬೀದರ್‌ಗೆ 6.45ಕ್ಕೆ ತಲುಪಲಿದೆ. ಕಲಬುರಗಿಯಿಂದ 22 ಮತ್ತು 4 ಗಂಟೆಗೆ ಹಾಗೂ ಬೀದರ್‌ದಿಂದ 18.30ಕ್ಕೆ ಹೊರಡಲಿರುವ ವಾಹನಗಳು ಗಂಗಾವತಿಗೆ 4 ಮತ್ತು 21.30ಕ್ಕೆ, ಕೊಪ್ಪಳಕ್ಕೆ 5.15ಕ್ಕೆ ತಲುಪಲಿದೆ.

ಕೊಪ್ಪಳ, ಗಂಗಾವತಿ, ಕಲಬುರಗಿ, ಬೀದರ್ ಮಾರ್ಗದ ಸಾರಿಗೆಗೆ ಮುಂಗಡ ಟಿಕೇಟ್ ಬುಕ್ ಮಾಡಲು ಸಂಸ್ಥೆಯ ಅಧಿಕೃತ ವೆಬ್‌ಸೈಟ್ ತಿತಿತಿ.ಇಡಿಣಛಿ.ಟಿ ನಲ್ಲಿ ಹಾಗೂ ಕಲ್ಯಾಣ ಕನಾಟಕ ರಸ್ತೆ ಸಾರಿಗೆ ನಿಗಮ ಕೊಪ್ಪಳ ವಿಭಾಗದ ಕೊಪ್ಪಳ, ಗಂಗಾವತಿ, ಕುಷ್ಟಗಿ, ಯಲಬುರ್ಗಾಗಳ ಮುಂಗಡ ಬುಕ್ಕಿಂಗ್ ಕೌಂಟರ್‌ಗಳಲ್ಲಿ ಮುಂಗಡ ಟಿಕೆಟ್ ಬುಕ್ ಮಾಡಬಹುದಾಗಿದೆ.

ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆ ಸೌಲಭ್ಯದ ಸದಪಯೋಗ ಪಡೆದುಕೊಳ್ಳುವಂತೆ ಕಲ್ಯಾಣ ಕನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭಾ ಚುನಾವಣೆ: ಬೆಳಗಾವಿಗೆ ಮೃಣಾಲ್-ಚಿಕ್ಕೋಡಿಗೆ ಪ್ರಿಯಾಂಕಾ ಬಹುತೇಕ ಟಿಕೆಟ್ ಫಿಕ್ಸ್..?

# ಬಿಜೆಪಿ ಹಿಡಿತ ತಪ್ಪಿಸಲು ಕಾಂಗ್ರೆಸ್ ನೂತನ ತಂತ್ರ–ಸಚಿವರ ಮಕ್ಕಳ ಸ್ಪರ್ಧೆಗೆ ಹೆಚ್ಚಿದ ಒತ್ತಡ



ಬೆಳಗಾವಿ: ಬೆಳಗಾವಿ ಜಿಲ್ಲೆಯ ಎರಡು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಹಿಡಿತ ತಪ್ಪಿಸಿ ಕಾಂಗ್ರೆಸ್ ಪಾರುಪತ್ಯೆ ಮೆರೆಯಲು ತಂತ್ರ ರೂಪಿಸಿರುವ ರಾಜ್ಯ ಕಾಂಗ್ರೆಸ್ ಇಬ್ಬರು ಅಭ್ಯರ್ಥಿಗಳನ್ನು ಒಮ್ಮತದಿಂದ ಅಂತಿಮಗೊಳಿಸಲಾಗಿದೆ ಎಂದು ಹೇಳಲಾಗುತ್ತಿದೆ.ಬೆಳಗಾವಿ ಮತ್ತು ಚಿಕ್ಕೋಡಿ ಲೋಕಸಭಾ ಕ್ಷೇತ್ರಗಳ ಟಿಕೆಟ್‌ಗಾಗಿ ಹಲವು ಕಾಂಗ್ರೆಸ್ ಮುಖಂಡರು ಹಾಗೂ ಹಲವು ಹೊಸ ಮುಖಗಳು ನಡೆಸುತ್ತಿರುವ ಲಾಬಿಗೆ ತೆರೆ ಬಿದ್ದಿರುವ ಬಗ್ಗೆ ಪಕ್ಷದ ಮೂಲಗಳಿಂದ ಮಾಹಿತಿ ಲಭ್ಯವಾಗಿದೆ. ಇವೆರಡು ಲೋಕಸಭಾ ಕ್ಷೇತ್ರಗಳಿಗಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಅವರ ಮಧ್ಯೆ ಟಿಕೆಟ್ ಲಾಭಿ ನಡೆದಿದ್ದು, ಅಂತಿಮವಾಗಿ ಚಿಕ್ಕೋಡಿ ಕ್ಷೇತ್ರದಿಂದ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ ಅವರು ಒಮ್ಮತದ ಕಣಕ್ಕಿಳಿಸಲು ತೀರ್ಮಾನಿಸಲಾಗಿದೆ ಎನ್ನಲಾಗಿದ. 2 ಕ್ಷೇತ್ರ ಮರಳಿ ಪಡೆಯಲು ಕೈ ತಂತ್ರ: ಇತ್ತ ಬೆಳಗಾವಿ ಕ್ಷೇತ್ರದಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಸ್ಪರ್ಧೆಯನ್ನು ಅಂತಿಮಗೊಳಿಸಲಾಗಿದೆ. ಸದ್ಯ ಇದನ್ನು ವರಿಷ್ಠರಿಗೆ ಶಿಫಾರಸು ಮಾಡ ಲಾಗಿದ್ದು, ಕಾಂಗ್ರೆಸ್ ಮುಖ್ಯಸ್ಥರು ಅಧಿಕೃತಗೊಳಿಸುವ ಸಾಧ್ಯತೆ ಇದೆ ಎನ್ನಲಾಗಿದೆ. 2 ಕ್ಷೇತ್ರ ಮರಳಿ ಪಡೆಯಲು ಕಾಂಗ್ರೆಸ್ ತಂತ್ರಈ ಮೂಲಕ ಬಿಜೆಪಿಯ ಪಾಲಾಗಿರುವ ಎರಡು ಭದ್ರಕೋಟೆಯನ್ನು ಮರಳಿ ಪಡೆಯಲು ಕಾಂಗ್ರೆಸ್ ಅಂತಿಮವಾಗಿ ಈ ಭಾಗದ ಪ್ರಭಾವಿ ನಾಯಕರಾದ ಜಾರಕಿಹೊಳಿ ಮತ್ತು ಹೆಬ್ಬಾಳ್ಕರ್ ಅವರನ್ನು ಅವಲಂಬಿಸಿದಂತಾಗಿದೆ. ಬೆಳಗಾವಿ ಮತ್ತು ಚಿಕ್ಕೋಡಿ ಲೋಕಸಭಾ ಟಿಕೆಟ್ ಹಂಚಿಕೆ, ಅಭ್ಯರ್ಥಿಗಳ ಆಯ್ಕೆ ವಿಚಾರವಾಗಿ ಸ್ಥಳೀಯ ಕಾಂಗ್ರೆಸ್ ನಾಯಕರು ಕ್ರಮವಾಗಿ ಕೈಗೊಂಡಿದ್ದಾರೆ. 2 ಕ್ಷೇತ್ರಕ್ಕೆ ಹಾಲಿ ನಾಯಕರ ಪುತ್ರರೇ ಫೈನಲ್: ಈ ಬಗ್ಗೆ ಪಕ್ಷದ ಹೈಕಮಾಂಡ್ ಅಂತಿಮ ತೀರ್ಮಾನ ಹೊರಡಿಸ'ಬೇಕಿದೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. 2 ಕ್ಷೇತ್ರಕ್ಕೆ ಹಾಲಿ ನಾಯಕರ ಪುತ್ರರೇ ಫೈನಲ್? ಅಲ್ಲದೇ ಈ ಎರಡು ಕ್ಷೇತ್ರಗಳಿಂದ ಎರಡು ರಾಜಕೀಯ ಕುಟುಂಬದ ಸದಸ್ಯರನ್ನು ಬಿಟ್ಟು ಬೇರೆ ಯಾರ'ನ್ನೂ ಕಾಂಗ್ರೆಸ್ ಕಣಕ್ಕಿಳಿಸುವುದಿಲ್ಲ ಎಂಬ ಮಾತುಗಳಿಗ ಸ್ಪಷ್ಟವಾಗಿದೆ.